ಅ.ದಾವಾ ನಂ. 45/2020 ಡಿ.ಡಬ್ಲ್ಯೂ-3

ದಿನಾಂಕಃ **05-07-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲುಃ ವಾದಿ ಪರ ಶ್ರೀ ಪಿ.ಡಿ ವಕೀಲರಿಂದ,</u>**

1) ಈ ದಾವೆಯನ್ನು ಯಾರು ಸಲ್ಲಿದ್ದಾರೆ ಎಂದು ನನಗೆ ಗೊತ್ತಿಲ್ಲ. ಆದರೆ ಶೋಬಮ್ಮ ರವರ ಮಗ ಸಲ್ಲಿಸಿರುತ್ತಾರೆ. ವಾದಿ ಯಾವ ಪರಿಹಾರ ಕೋರಿ ಈ ದಾವೆಯನ್ನು ಸಲ್ಲಿಸಿದ್ದಾರೆ ಎಂದು ನನಗೆ ಗೊತ್ತಿಲ್ಲ. ಸರ್ವೇ ನಂ. 41, 43 ಮತ್ತು 44 ಆಸ್ತಿಗಳಿಗೆ ಸಂಬಂಧಿಸಿದಂತೆ ದಾವೆಯನ್ನು ಸಲ್ಲಿಸಿರುತ್ತಾರೆ. ದಾವಾ ಅನುಸೂಚಿ ಸ್ವತ್ತುಗಳ ಪಕ್ಕದಲ್ಲಿರುವ ಆಸ್ತಿಗಳಲ್ಲಿ ವಾದಿಯು ಸ್ವಾಧೀನದಲ್ಲಿರುತ್ತಾರೆ. ವಾದಿ ಸದರಿ ಆಸ್ತಿಗಳನ್ನು ಕರಾರು ಪತ್ರ ಮೂಲಕ ಪಡೆದುಕೊಂಡು ನಂತರ ನೊಂದಣಿ ಮಾಡಿಸಿಕೊಂಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ.

2) ವಾದಿಯ ಸ್ವಾಧೀನ ಇರುವ ಆಸ್ತಿಯಲ್ಲಿ ಕೊಳವೆ ಬಾವಿ ಮತ್ತು ತೆಂಗಿನ ಮರಗಳು ಇವೆ ಎಂದರೆ ಸರಿ. ವಾದಿಯ ಪರವಾಗಿ ಪ್ರತಿವಾದಿವಾದಿಗಳು ದಿಃ 20.04.2019 ರಂದು ದಾವಾ ಆಸ್ತಿಗಳನ್ನು ಮಾರಾಟ ಮಾಡುತ್ತೇವೆ ಎಂದು ಒಪ್ಪಿ ನೊಂದಾಯಿತ ಕರಾರು ಪತ್ರ ಬರೆದುಕೊಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನಾನು ಮೂರನೇ ಪ್ರತಿವಾದಿ ಮಾತು ಕೇಳಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ.